# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 259(1918)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು )

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : ರಾಜ್ಯದಲ್ಲಿ ಸ್ಥಾಪನೆಯಾಗಿರುವ ವಿಶೇಷ ಆರ್ಥಿಕ ವಲಯ (SEZ) ಗಳ ಕುರಿತು

(ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ಎಷ್ಟು ವಿಶೇಷ ಆರ್ಥಿಕ ವಲಯ (SEZ) ಗಳು ಸ್ಥಾಪಿತವಾಗಿವೆ; ಮತ್ತು ಎಷ್ಟು ವಿಶೇಷ ಆರ್ಥಿಕ ವಲಯ (SEZ) ಗಳು ಕಾರ್ಯನಿರ್ವಹಿಸುತ್ತಿವೆ; (ವಿವರ ನೀಡುವುದು)

(ಆ) ಸ್ಥಾಪಿತವಾಗಿ ಮತ್ತು ಕಾರ್ಯನಿರ್ವಹಿಸುತ್ತಿರುವ ವಿಶೇಷ ಆರ್ಥಿಕ ವಲಯ (SEZ)ಗಳು ಕರ್ನಾಟಕ ಕೈಗಾರಿಕೆ ಕಾಯ್ದೆಯ ನಿಯಮಗಳಂತೆ ಎಲ್ಲಾ ರೀತಿಯ ಸೌಲಭ್ಯ ಮತ್ತು ಸವಲತ್ತುಗಳನ್ನು ಒದಗಿಸಿವೆಯೇ; (ವಿವರ ನೀಡುವುದು)

(ಇ) ಸದರಿ ವಿಶೇಷ ಆರ್ಥಿಕ ವಲಯ (SEZ) ಗಳಲ್ಲಿ ಎಷ್ಟು ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಒಟ್ಟು ಎಷ್ಟು ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು)

(ಈ) ಕೊರೋನ-19 ಸಾಂಕ್ರಾಮಿಕ ಖಾಯಿಲೆಯ ಹಿನ್ನಲೆಯಲ್ಲಿ ಎಷ್ಟು ಕಾರ್ಖಾನೆಗಳು ಮುಚ್ಚಲ್ಪಟ್ಟಿವೆ; ಮತ್ತು ಎಷ್ಟು ಸಂಖ್ಯೆಯ ಉದ್ಯೋಗಿಗಳು ನಿರುದ್ಯೋಗಿಗಳಾಗಿದ್ದಾರೆ; (ವಿವರ ನೀಡುವುದು)

(ಉ) ರಾಜ್ಯದಲ್ಲಿರುವ ವಿಶೇಷ ಆರ್ಥಿಕ ವಲಯ (SEZ) ಗಳಲ್ಲಿರುವ ಕೈಗಾರಿಕೆಗಳಿಗೆ ಸಮಯಕ್ಕೆ ಸರಿಯಾಗಿ ಕಚ್ಚಾ ವಸ್ತುಗಳು ಮತ್ತು ಇತರೆ ಬಿಡಿಭಾಗಗಳ ಪೂರೈಕೆಯಾಗದೇ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)